ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಸರ್ಕಾರದ ವಿವಿಧ ಆದೇಶಗಳಲ್ಲಿ ಮಂಜೂರಾಗಿರುವ 312.9 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು M/s Suzlon Gujarat Wind Park Limited ಕಂಪನಿಗೆ ವರ್ಗಾಯಿಸುವ ಬಗ್ಗೆ.

ಓದಲಾಗಿದೆ 1)ಸರ್ಕಾರದ ಆದೇಶ ಸಂಖ್ಯೆ: ಇಎನ್ 204 ಎನ್‌ಸಿಇ 2009, ದಿನಾಂಕ:20.05.2010.
2)ಸರ್ಕಾರದ ಆದೇಶ ಸಂಖ್ಯೆ: ಇಎನ್ 100 ಎನ್‌ಸಿಇ 2011, ದಿನಾಂಕ:06.04.2011.
3)ಸರ್ಕಾರದ ಆದೇಶ ಸಂಖ್ಯೆ: ಇಎನ್ 101 ಎನ್‌ಸಿಇ 2011, ದಿನಾಂಕ:06.04.2011.
4)ಸರ್ಕಾರದ ಆದೇಶ ಸಂಖ್ಯೆ: ಇಎನ್ 102 ಎನ್‌ಸಿಇ 2011, ದಿನಾಂಕ:06.04.2011.
5)ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/SISL-50.4 MW to 317.10 MW/2016/1301-S.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ, M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಒಟ್ಟು 250.2 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2) (3) ಮತ್ತು (4) ರ ಸರ್ಕಾರದ ಆದೇಶಗಳಲ್ಲಿ ಕ್ರಮವಾಗಿ M/s Suzlon Infrastructure Services Limited ಕಂಪನಿಗೆ ಹಂಚಿಕೆಯಾಗಿದ್ದ 250.2 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಹಾವೇರಿ ಜಿಲ್ಲೆಯ ಅಗಸನಹಳ್ಳಿ, ಸಂದಿಹಳ್ಳಿ ಮತ್ತು ಬ್ಯೆವಗಿ ಗ್ರಾಮಗಳಲ್ಲಿ ಮಂಜೂರಾಗಿದ್ದ ಅಂತಿಕ 3 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 16.8 ಮೆ.ವ್ಯಾ ಸಾಮರ್ಥ್ಯಕ್ಕೆ, ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಹಿರೇಮನ್ನಪುರ ಗ್ರಾಮದಲ್ಲಿ ಮಂಜೂರಾಗಿದ್ದ 4.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 37.8 ಮೆ.ವ್ಯಾ. ಸಾಮರ್ಥ್ಯಕ್ಕೆ ಮತ್ತು ರಾಯಚೂರು ಜಿಲ್ಲೆಯ ಸಿಸ್ಸಿಗುಡ್ಡ ಗ್ರಾಮದಲ್ಲಿ ಮಂಜೂರಾಗಿದ್ದ 4.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 19.5 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಿ ಆದೇಶಿಸಲಾಗಿತ್ತು. ಇದರಂತೆ, M/s Suzlon Infrastucture Services Limited ಕಂಪನಿಗೆ ಒಟ್ಟು 312.9 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿಯಡಿಯಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಸರ್ಕಾರದ ವಿವಿಧ ಆದೇಶಗಳಲ್ಲಿ ಹಂಚಿಕೆಯಾಗಿರುವ 312.9 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು M/s Suzlon Gujarat Wind Park Limited ಕಂಪನಿಯ ಹೆಸರಿಗೆ ಬದಲಾವಣೆ ಮಾಡುವಂತೆ ಕೋರಿದ್ದು,

----2)

ಈ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯ, ಮುಂಬೈ ತೀರ್ಪಿನಂತೆ ಎರಡೂ ಕಂಪನಿಗಳು Merge /Amalgamation ಆಗಿರುವ ಬಗ್ಗೆ ಪ್ರಮಾಣ ಪತ್ರವನ್ನು ಪಡೆಯಲು ಅಭಿವೃದ್ಧಿದಾರರು Ministry of Corporate Affairs ಗೆ ದಿನಾಂಕ: 17.05.2011 ರಂದು ನಮೂನೆ 61 ರಲ್ಲಿ ಅರ್ಜಿಯನ್ನು ಸಲ್ಲಿಸಿರುವ ಸ್ವೀಕೃತಿಯನ್ನು ಒದಗಿಸಿರುತ್ತಾರೆ. ಈ ಬಗ್ಗೆ ನಿಯಮಾನುಸಾರ ಹೆಸರು ಬದಲಾವಣೆ ಶುಲ್ಕವನ್ನು ಕ್ರೆಡಲ್‌ಗೆ ಸಂದಾಯ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ, M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಸರ್ಕಾರದ ವಿವಿಧ ಆದೇಶಗಳಲ್ಲಿ ಹಂಚಿಕೆಯಾಗಿರುವ 312.9 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು M/s Suzlon Gujarat Wind Park Limited ಕಂಪನಿ ಹೆಸರಿಗೆ ಬದಲಾವಣೆ ಮಾಡುವಂತೆ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಕೂಲಂಕಷವಾಗಿ ಪರಿಶೀಲಿಸಲಾಗಿ, ಮಾನ್ಯ ಮುಂಬೈ ಉಚ್ಚ ನ್ಯಾಯಾಲಯದ ತೀರ್ಪಿನಂತೆ M/s Suzlon Infrastructure Services Limited ಕಂಪನಿ ಮತ್ತು M/s Suzlon Gujarat Wind Park Limited ಕಂಪನಿಗಳ Merge /Amalgamation ಬಗ್ಗೆ ಪ್ರಮಾಣ ಪತ್ರವನ್ನು ಪಡೆಯಲು Ministry of Corporate Affairs ಗೆ ದಿನಾಂಕ: 17.05.2011 ರಂದು ನಮೂನೆ 61 ರಲ್ಲಿ ಅರ್ಜಿಯನ್ನು ಸಲ್ಲಿಸಿರುವ ಸ್ವೀಕೃತಿಯನ್ನು ಪರಿಶೀಲಿಸಲಾಗಿ, ಸದರಿ ಅರ್ಜಿಯನ್ನು ಸಲ್ಲಿಸಿ 5 ವರ್ಷಗಳ ನಂತರವು Registrar of Companies, Ministry of Corporate Affairs, Government of India ರವರು ಪ್ರಮಾಣಪತ್ರವನ್ನು ನೀಡದೆ ಇರುವುದರಿಂದ ಮತ್ತು ಸದರಿ ಸ್ವೀಕೃತಿಯ ಕೊನೆಯ ಭಾಗದ ನೋಟ್‌ನಲ್ಲಿ ಇದಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ಮಾಹಿತಿಯನ್ನು ಒದಗಿಸದೇ ಇದ್ದಲ್ಲಿ, ಅರ್ಜಿಯು ತೀರಸ್ಕೃತಗೊಂಡಿದೆ ಎಂದು ತಿಳಿಯುವಂತೆ ಷರಾ ನಮೂದಿಸಿರುವ ಹಿನ್ನೆಲೆಯಲ್ಲಿ ಹಾಗೂ ಅಭಿವೃದ್ಧಿದಾರರು ಸದರಿ ಕಂಪನಿಗಳ Merge /Amalgamation ಗೆ ಸಂಬಂಧಿಸಿದಂತೆ ಯಾವುದೇ ಪೂರಕ ದಾಖಲಾತಿಗಳನ್ನು ನೀಡದೆ ಇರುವುದರಿಂದ ಈ ಹಂತದಲ್ಲಿ Merge /Amalgamation ಎಂದು ಪರಿಗಣಿಸುವುದು ಸೂಕ್ತವಲ್ಲದ ಕಾರಣ M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಸರ್ಕಾರದ ವಿವಿಧ ಆದೇಶಗಳಲ್ಲಿ ಹಂಚಿಕೆಯಾಗಿರುವ 312.9 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು M/s Suzlon Gujarat Wind Park Limited ಕಂಪನಿಗೆ ನಿಯಮಾನುಸಾರ ನಿಗಧಿತ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸುವ ಷರತ್ತಿಗೊಳಪಟ್ಟು ವರ್ಗಾಯಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 261 ಎನ್‌ಸಿಇ 2016 ಬೆಂಗಳೂರು, ದಿನಾಂಕ:24.10.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಎನ್ 204 ಎನ್‌ಸಿಇ 2011, ದಿನಾಂಕ: 20.05.2010, ಇಎನ್ 100 ಎನ್‌ಸಿಇ 2011, ದಿನಾಂಕ: 06.04.2011, ಇಎನ್ 101 ಎನ್‌ಸಿಇ 2011 ದಿನಾಂಕ: 06.04.2011 ಮತ್ತು ಇಎನ್ 102 ಎನ್‌ಸಿಇ 2011, ದಿನಾಂಕ: 06.04.2011 ಗಳಲ್ಲಿ M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಹಂಚಿಕೆಯಾಗಿರುವ 312.9 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು M/s Suzlon Gujarat Wind Park Limited ಕಂಪನಿಗೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ವರ್ಗಾಯಿಸಿ ಆದೇಶಿಸಲಾಗಿದೆ.

---3)

**ಷರತ್ತುಗಳು:**

1 M/s Suzlon Gujarat Wind Park Limited ಕಂಪನಿಯು ಸರ್ಕಾರಿ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ 06.1.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಪೂರಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 M/s Suzlon Gujarat Wind Park Limited ಕಂಪನಿಯು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ನಿಯಮಾನುಸಾರ ಪೂರಕ ವಿದ್ಯುತ್ ಖರೀದಿ ಒಡಂಬಡಿಕೆ / ಕೆಪಿಟಿಸಿಎಲ್‌ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಪೂರಕ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

3 M/s Suzlon Gujarat Wind Park Limited ಕಂಪನಿಯು ಯೋಜನೆಯು ವರ್ಗಾವಣೆಗೆ ಸಂಬಂಧಿಸಿದಂತೆ ನಿಯಮಾನುಸಾರ ನಿಗಧಿಪಡಿಸಿರುವ ವರ್ಗಾವಣೆ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

4 ಸರ್ಕಾರದ ಆದೇಶ ಸಂಖ್ಯೆ : ಇಎನ್ 392 ಎನ್‌ಸಿಇ 2008, ದಿನಾಂಕ :13.10.2009 ರಲ್ಲಿ ನಿಗಧಿಪಡಿಸಿರುವಂತೆ ವರ್ಗಾವಣೆ ಶುಲ್ಕವನ್ನು ಪಾವತಿಸಿಕೊಂಡ ನಂತರವೇ ಕೆ.ಆರ್.ಇ.ಡಿ.ಎಲ್. ಸಂಸ್ಥೆಯು ಒಡಂಬಡಿಕೆಯನ್ನು ಮಾಡಿಕೊಳ್ಳತಕ್ಕದ್ದು.

5 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಉಳಿದಂತೆ ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 204 ಎನ್‌ಸಿಇ 2011, ದಿನಾಂಕ: 20.05.2010, ಇಎನ್ 100 ಎನ್‌ಸಿಇ 2011, ದಿನಾಂಕ: 06.04.2011, ಇಎನ್ 101 ಎನ್‌ಸಿಇ 2011 ದಿನಾಂಕ: 06.04.2011 ಮತ್ತು ಇಎನ್ 102 ಎನ್‌ಸಿಇ 2011, ದಿನಾಂಕ: 06.04.2011 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

24.10

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

---4)

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ ಬೆಂಗಳೂರು–9.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು–1.

8 ವ್ಯವಸ್ಥಾಪಕ ನಿರ್ದೇಶಕರು, ಹೆಸ್ಕಾಂ, ಜೆಸ್ಕಾಂ, ಮೆಸ್ಕಾಂ, ಬೆಸ್ಕಾಂ, ಸೆಸ್ಕ್.

9 ಜಿಲ್ಲಾಧಿಕಾರಿ, ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳು.

10 ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಪ್ರಾದೇಶಿಕ ವಿಭಾಗ.

11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

12 M/s Suzlon Gujarat Wind Park Limited (Formerly M/s Suzlon Infrastructure Services Limited) 100/2, Anchorage 2, 3rd Floor, Richmond Road, Bangalore.

13 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

14 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

15 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.